**ದಿನಾಂಕ :21-11-2020 ರಂದು ಬೆಳಿಗ್ಗೆ 10.30 ಗಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಶಾಸಕರು, ಪದ್ಮನಾಭನಗರ ವಿಧಾನಸಭಾ ಕ್ಷೇತ್ರ ಹಾಗೂ ಕರ್ನಾಟಕ ಸರ್ಕಾರದ ಕಂದಾಯ ಸಚಿವರವರಾದ ಮಾನ್ಯ ಶ್ರೀ ಆರ್.ಅಶೋಕ ರವರ ಅಧ್ಯಕ್ಷತೆಯಲ್ಲಿ ನಡೆದ 8 ವಾರ್ಡ್‌ಗಳ ವಾರ್ಡ್ ಸಮಿತಿ ಸಭೆಯ ನಡವಳಿಗಳು :-**

ಕಾರ್ಯಪಾಲಕ ಅಭಿಯಂತರರು ಪದ್ಮನಾಭನಗರ ವಿಭಾಗ ರವರಾದ ಶ್ರೀ ಕಲ್ಲೇಶಪ್ಪ ರವರು ಪ್ರಾರಂಭದಲ್ಲಿ ಉಪಸ್ಥಿತರಿದ್ದ ಎಲ್ಲಾ ನೋಡೆಲ್ ಅಧಿಕಾರಿಗಳು, ಹಾಗೂ ಸಭೆಗೆ ಹಾಜರಿದ್ದ ಎಲ್ಲಾ ಇಲಾಖಾ ಅಧಿಕಾರಿಗಳನ್ನು ಪರಿಚಯಿಸುತ್ತಾ ಸ್ವಾಗತ ಕೋರಿದರು.

ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ನೋಡೆಲ್ ಅಧಿಕಾರಿಗಳು ಹಾಗೂ ಮಾನ್ಯ ಶಾಸಕರ ಜೊತೆಯಲ್ಲಿ 4ನೇ ಸಭೆಯನ್ನು ಆಯೋಜಿಸಲಾಗಿದ್ದು, ಪ್ರಥಮವಾಗಿ ಈ ಹಿಂದಿನ ಸಭೆಯ ನಡವಳಿಗಳ ಬಗ್ಗೆ ಚರ್ಚಿಸಿ ಈ ಬಗ್ಗೆ ವಿವಿಧ ಇಲಾಖೆಗಳಿಂದ ಕೈಗೊಂಡ ಕ್ರಮಗಳನ್ನು ಸಭೆಯ ಗಮನಕ್ಕೆ ತರಲಾಯಿತು.

ಪಾಲಿಕೆ ವತಿಯಿಂದ ವಾರ್ಡ್‌ನ ವಿವಿಧ ಭಾಗಗಳಲ್ಲಿ ಪ್ರತಿ ದಿನ ಕೋವಿಡ್ ಪರೀಕ್ಷೆಗಳನ್ನು ನಡೆಸುತ್ತಿದ್ದು, ಈ ಬಗ್ಗೆ ಸಾರ್ವಜನಿಕರಲ್ಲಿ ಹೆಚ್ಚಿನ ಅರಿವು ಮೂಡಿಸಲು ಹಾಜರಿದ್ದ ಅಧಿಕಾರಿಗಳಿಗೆ ಸೂಚಿಸಲಾಯಿತು. ಮುಂದುವರಿದು ಹಾಜರಿದ್ದ ಅಧಿಕಾರಿಗಳಿಗೆ ಸಾರ್ವಜನಿಕರಲ್ಲಿ ಎಲ್ಲರೂ ಮುಖಗೌಸ್‌ಗಳನ್ನು ಕಡ್ಡಾಯವಾಗಿ ಧರಿಸಲು ಸೂಚಿಸಬೇಕೆಂದು ಮಾನ್ಯ ಶಾಸಕರು ಹಾಗೂ ಕಂದಾಯ ಸಚಿವರು ಸಲಹೆ ನೀಡಿ ಮೊದಲನೇ ಆದ್ಯತೆಯನ್ನು ಕೋವಿಡ್-19 ಗೆ ಒತ್ತು ನೀಡುವಂತೆ ಎಲ್ಲಾ ನೋಡೆಲ್ ಅಧಿಕಾರಿಯವರಿಗೆ ತಿಳಿಸಲಾಗಿರುತ್ತದೆ.

1. ಬೆಸ್ಕಾಂ ಇಲಾಖೆ ವತಿಯಿಂದ ರಸ್ತೆ ಬದಿಯಲ್ಲಿ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ನಿರುಪಯುಕ್ತ ವಿದ್ಯುತ್ ಕಂಬ ಹಾಗೂ ವಿದ್ಯುತ್ ಸಾಮಾಗ್ರಿಗಳನ್ನು ಕೂಡಲೇ ತೆರವುಗೊಳಿಸಿ ನಿಗಧಿತ ಸ್ಥಳದಲ್ಲಿ ಸಂಗ್ರಹಿಸಲು ಸಭೆಯಲ್ಲಿ ತಿಳಿಸಲಾಗಿರುತ್ತದೆ.

   ಬೆಸ್ಕಾಂ ಇಲಾಖೆಯಿಂದ ಕತ್ತರಿಸಲಾಗಿರುವ ಮರದ ಕೊಂಬೆಗಳನ್ನು ಕೂಡಲೇ ತೆರವುಗೊಳಿಸಲು ಚಿಕ್ಕಲ್ಲಸಂದ್ರದ ಕೆರೆಯ ಜಾಗದಲ್ಲಿ ಸಂಗ್ರಹಿ ತದ ನಂತರ ನಿಗಧಿತ ಸ್ಥಳಕ್ಕೆ ರವಾನಿಸಲು ಸೂಚಿಸಲಾಗಿರುತ್ತದೆ.

2) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇಲಾಖಾ ವತಿಯಿಂದ ಪೈಪ್‌ಲೈನ್ ಅಳವಡಿಸಲು ಕತ್ತರಿಸಲಾಗಿರುವ ಪಾಲಿಕೆ ರಸ್ತೆಯನ್ನು ತಕ್ಷಣವೇ ಸುಸ್ಥಿತಿಗೆ (Restoration) ತರಬೇಕೆಂದು ಸಭೆಯಲ್ಲಿ ತಿಳಿಸಲಾಗಿರುತ್ತದೆ.

3) ಗಾಳಿ ಮಳೆಗೆ ಬಿದ್ದಿರುವ ಮರ ಮತ್ತು ಮರದ ಕೊಂಬೆಗಳನ್ನು ಪಾಲಿಕೆಯ ಅರಣ್ಯ ಇಲಾಖೆ ವತಿಯಿಂದ ಕೂಡಲೇ ರಸ್ತೆ ಬದಿಯಿಂದ ತೆರವುಗೊಳಿಸಿ ನಿಗಧಿತ ಸ್ಥಳದಲ್ಲಿ ಸಂಗ್ರಹಿಸಲು ಸೂಚಿಸಲಾಯಿತು.

Scanned by CamScanner

4) ಬೃಹತ್ ನೀರುಗಾಲುವೆ ಇಲಾಖೆ ವತಿಯಿಂದ ನಿರ್ಮಾಣ ಮಾಡುತ್ತಿರುವ ತಡೆಗೋಡೆಯನ್ನು ಅತೀ ಶೀಘ್ರವಾಗಿ ಮುಗಿಸಲು ಸೂಚಿಸಲಾಯಿತು. (ದತ್ತಾತ್ರೇಯನಗರ ಹೊಸಕೆರೆಹಳ್ಳಿ)

5) ಘನತ್ಯಾಜ್ಯ ಇಲಾಖೆಗೆ ನೀಡಲಾಗಿರುವ 25 ಕಾಂಪ್ಯಾಕ್ಟರ್‌ಗಳನ್ನು ಉಪಯೋಗಿಸಿಕೊಂಡು ಕ್ಷೇತ್ರದ ಎಲ್ಲಾ ಭಾಗಗಳಲ್ಲಿ ಘನತ್ಯಾಜ್ಯವನ್ನು ತೆರವುಗೊಳಿಸಲು ಸೂಚಿಸಲಾಗಿರುತ್ತದೆ.

6) ರಸ್ತೆಮೂಲಭೂತ ಸೌಕರ್ಯ ಇಲಾಖೆಯ ವತಿಯಿಂದ ಕ್ಷೇತ್ರದ ಮುಖ್ಯರಸ್ತೆಗಳಲ್ಲಿ ಉಂಟಾಗಿರುವ ರಸ್ತೆ ಗುಂಡಿಗಳನ್ನು ತಕ್ಷಣವೇ ಮುಚ್ಚಲು ಸೂಚಿಸಲಾಗಿರುತ್ತದೆ.

7) ಆರೋಗ್ಯ ಇಲಾಖೆ ವತಿಯಿಂದ ನಿರ್ವಹಿಸುತ್ತಿರು ಆಸ್ಪತ್ರೆಗಳ ಸುತ್ತಮುತ್ತ ಯಾವುದೇ ತರಹದ ನಿರುಪಯುಕ್ತ ವಸ್ತುಗಳನ್ನು ಸಂಗ್ರಹಿಸದ ಹಾಗೆ ಗಮನಹರಿಸಿ ಆಸ್ಪತ್ರೆ ಆವರಣವನ್ನು ಸ್ವಚ್ಛವಾಗಿಡಲು ಸೂಚಿಸಲಾಯಿತು.

8) ತೋಟಗಾರಿಕೆ ಇಲಾಖೆಯಿಂದ ನಿರ್ವಹಿಸಲಾಗುತ್ತಿರುವ ಉಧ್ಯಾನವನಗಳಲ್ಲಿ ಸ್ವಚ್ಛತೆಯನ್ನು ಕಾಪಾಡುವುದರ ಜೊತೆಗೆ ಮಕ್ಕಳ ಆಟದ ಸಾಮಾಗ್ರಿಗಳನ್ನು ಸುಸ್ಥಿತಿಯಲ್ಲಿಡಲು ತಕ್ಷಣವೇ ಕ್ರಮ ವಹಿಸಲು ಸೂಚಿಸಲಾಗಿರುತ್ತದೆ.

9) ಪಾಲಿಕೆಯ ವಿಧ್ಯುತ್ ಇಲಾಖೆಯಿಂದ ನಿರ್ವಹಿಸುತ್ತಿರುವ ಬೀದಿ ದೀಪಗಳನ್ನು ಸುಸ್ಥಿತಿಯಲ್ಲಿಡಲು ಮತ್ತು ವಿಧ್ಯುತ್ ಕಂಬಗಳಲ್ಲಿ ತೂಗಾಡುತ್ತಿರುವ ನಿರುಪಯುಕ್ತ ವಸ್ತುಗಳನ್ನು ಕೂಡಲೇ ತೆರವುಗೊಳಿಸಿ ವಿಧ್ಯುತ್ ಅಡಚಣೆಯನ್ನು ತಪ್ಪಿಸುವಂತೆ ಸೂಚಿಸಲಾಗಿರುತ್ತದೆ.

ಮುಂದುವರೆದಂತೆ ವಾರ್ಡ್ ಸಮಿತಿ ಅಧ್ಯಕ್ಷರು ಪರಿಶಿಷ್ಟ ಜಾತಿ/ ಪಂಗಡ ಮತ್ತು ಹಿಂದುಳಿದ ಮತ್ತು ಅಲ್ಪ ಸಂಖ್ಯಾತ ವರ್ಗ ಮತ್ತು ಆರ್ಥಿಕವಾಗಿ ಹಿಂದುಳಿದ ವರ್ಗದವರಿಗೆ ಒಂಟಿ ಮನೆ ಯೋಜನೆ ಅಡಿಯಲ್ಲಿ ಮನೆ ನಿರ್ಮಾಣದ ಅನುದಾನದ ಆಯ್ಕೆಯ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿ ಈ ಕೆಳಕಂಡ 02 ಫಲಾನುಭವಿಗಳಿಗೆ ಒಂಟಿ ಮನೆ ಯೋಜನೆ ಅಡಿಯಲ್ಲಿ ಮನೆ ನಿರ್ಮಾಣಕ್ಕೆ ವಾರ್ಡ್ ಸಮಿತಿಯು ತೀರ್ಮಾನಿಸಿ ಒಮ್ಮತದಿಂದ ಸಭೆಯಲ್ಲಿ ಅನುಮೋದಿಸಲಾಯಿತು.

| ಕ್ರಮ ಸಂಖ್ಯೆ | ಫಲಾನುಭವಿಗಳ ಹೆಸರು | ಫಲಾನುಭವಿಗಳ ವಿಳಾಸ |
|---|---|---|
| 1 | ಶ್ರೀಮತಿ ಭಾಗ್ಯ | ನಂ–42/3, 2ನೇ ಅಡ್ಡರಸ್ತೆ, ಮುನೇಶ್ವರನಗರ, ಬನಶಂಕರಿ 3ನೇ ಹಂತ, ಬೆಂಗಳೂರು–85 |
| 2 | ಶ್ರೀ ಕಾಂತರಾಮ್.ಬಿ.ಕೆ | ನಂ–333, 7ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, ಕುಮಾರಸ್ವಾಮಿ ಬಡಾವಣೆ 2ನೇ ಹಂತ, ಬೆಂಗಳೂರು. |

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು

Scanned by CamScanner

ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ಮಾನ್ಯ ಶಾಸಕರು, ಪದ್ಮನಾಭನಗರ ವಿಧಾನಸಭಾ ಕ್ಷೇತ್ರ ಹಾಗೂ ಕರ್ನಾಟಕ ಸರ್ಕಾರದ ಕಂದಾಯ ಸಚಿವರವರಾದ ಮಾನ್ಯ ಶ್ರೀ ಆರ್.ಅಶೋಕ ರವರ ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡಲ್ ಅಧಿಕಾರಿ/ವಾರ್ಡ್ ಸಮಿತಿ ಅಧ್ಯಕ್ಷರು.

ವಾರ್ಡ್ ಸಮಿತಿ ಸಂಚಾಲಕರು

Scanned by CamScanner